*EP/29/SLB/2020-SCD B-EP-Sec*

# ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:-** ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಸದಸ್ಯರನ್ನು ಪುನರ್ ರಚಿಸುವ ಕುರಿತು.

**ಓದಲಾಗಿದೆ:** 1. ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರ ಪತ್ರ ಸಂಖ್ಯೆ:ಎ8/ಮಂ.ಸ.ನೇ/36/2019-20 ದಿನಾಂಕ:10.02.2020.

2. ಸರ್ಕಾರದ ಆದೇಶ ಸಂಖ್ಯೆ:ಇಡಿ 12 ಎಸ್ಎಲ್‌ಬಿ 2017 ದಿನಾಂಕ:24.01.2017.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮಾಂಕ:(1)ರ ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಪ್ರಸ್ತಾವನೆಯಲ್ಲಿ ಕ್ರಮಾಂಕ:(2)ರ ಸರ್ಕಾರದ ಆದೇಶ ಸಂಖ್ಯೆ:ಇಡಿ 12 ಎಸ್ಎಲ್‌ಬಿ 2017 ದಿನಾಂಕ:24.01.2017ರಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಸದಸ್ಯರನ್ನು ಪುನರ್ ರಚಿಸುವ ಸದಸ್ಯರ ಅಧಿಕಾರ ಅವಧಿಯು ದಿನಾಂಕ:24.01.2020ಕ್ಕೆ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ, ಹೊಸ ಸದಸ್ಯರನ್ನೊಳಗೊಂಡ ಪರೀಕ್ಷಾ ಮಂಡಳಿಯ ಸದಸ್ಯರನ್ನು ಪುನರ್ ರಚಿಸಲು ರಾಜ್ಯದ ಎಲ್ಲಾ ವಿಭಾಗಗಳಿಗೆ ಆದ್ಯತೆ ನೀಡಿ ರಚಿಸಿರುವ ಸಂಭಾವ್ಯ ಸದಸ್ಯರ ಪಟ್ಟಿಯೊಂದಿಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಪರಿಷ್ಕೃತ ಸದಸ್ಯರ ಆದೇಶವನ್ನು ಹೊರಡಿಸುವಂತೆ ಕೋರಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಿ ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಎಸ್ಎಲ್‌ಬಿ 2020**

**ಬೆಂಗಳೂರು, ದಿನಾಂಕ:02ನೇ ಮಾರ್ಚ್ 2020**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಸದಸ್ಯರನ್ನು ಮುಂದಿನ ಮೂರು ವರ್ಷಗಳಿಗೆ ಪುನರ್ ರಚಿಸಿ ಈ ಕೆಳಕಂಡಂತೆ ಆದೇಶಿಸಿದೆ.

| | | |
|---|---|---|
| 1. | ಅಧ್ಯಕ್ಷರು | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಪದನಿಮಿತ್ತ ಅಧ್ಯಕ್ಷರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-560003 |
| 2 | ಮಂಡಳಿಯ ಕಾರ್ಯಕಾರಿ ಉಪಾಧ್ಯಕ್ಷರು | ನಿರ್ದೇಶಕರು ಪರೀಕ್ಷೆಗಳು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-560003. |
| 3 | ಪದನಿಮಿತ್ತ ಸದಸ್ಯರು | 1. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.<br>2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ<br>3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ<br>4. ನಿರ್ದೇಶಕರು(ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.<br>5. ನಿರ್ದೇಶಕರು, ಇತರೆ ಪರೀಕ್ಷೆಗಳು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು. |

A 7/3/2020

| | | |
|---|---|---|
| | | 6. ನಿರ್ದೇಶಕರು, ರಾಜ್ಯ ಶಿಕ್ಷಣ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು.<br>7. ನಿರ್ದೇಶಕರು, ಆರ್‌ಎಂಎಸ್‌ಎ, ಬೆಂಗಳೂರು<br>8. ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು. |
| 4 | ಆಯ್ಕೆ ಸದಸ್ಯರು | ಪ್ರಾಂಶುಪಾಲರು, ಸರ್ಕಾರಿ ಬಿ.ಇಡಿ ಕಾಲೇಜು (ಸಿ.ಟಿ.ಇ) ಬೆಳಗಾವಿ |
| 5 | ನಾಮ ನಿರ್ದೇಶನ ಸದಸ್ಯರು | 2. ಶ್ರೀ ಡಿ ವೆಂಕಟೇಶಯ್ಯ, ನಿವೃತ್ತ ನಿರ್ದೇಶಕರು (ಪರೀಕ್ಷೆಗಳು), ಕಪ್ರೌಶಿಪಮಂಡಳಿ, ಬೆಂಗಳೂರು.<br>2. ಶ್ರೀ ಎನ್.ಸತ್ಯಪ್ರಕಾಶ್, ನಿವೃತ್ತ ಮುಖ್ಯ ಶಿಕ್ಷಕರು, ಕುರುಬರಹಳ್ಳಿ, ಬೆಂಗಳೂರು. |
| 6 | ಪ್ರೌಢಶಾಲೆಗಳನ್ನು ಪ್ರತಿನಿಧಿಸುವ ಇಬ್ಬರು ಮುಖ್ಯ ಶಿಕ್ಷಕರು | 3. ಖಾಸಿಂ ಸಾಭ್ ಹುಸೇನ್ ಸಾಭ್ ಮುಜಾವರ್, ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ ಕದಾಂಪುರ, ಬಾಗಲಕೋಟೆ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.<br>4. ಎಸ್ ನಾಗಭೂಷಣ್, ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ ಹುಳಕಿಹಾಳ, ಗಂಗಾವತಿ ತಾಲ್ಲೂಕು, ಕೊಪ್ಪಳ ಜಿಲ್ಲೆ. |
| 7 | ಪ್ರೌಢಶಾಲೆಗಳ ಇಬ್ಬರು ಸಹ ಶಿಕ್ಷಕರುಗಳು | 3. ಶ್ರೀ ಹೆಚ್ ಕೆ ಮಂಜುನಾಥ, ಸಹ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ, ಹೆಬ್ಬಾಳ, ಬೆಂಗಳೂರು ಉತ್ತರ ಜಿಲ್ಲೆ, ಬೆಂಗಳೂರು<br>4. ಕಿರಣ್ ಹೆಗಡೆ, ಸಹ ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ ಕಾವಡಿ, ಬ್ರಹ್ಮಾವರ ವಲಯ, ಉಡುಪಿ ಜಿಲ್ಲೆ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Rajyashree V.T 2/3
(ವಿ.ಟಿ.ರಾಜ್ಯಶ್ರೀ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ, (ಪ್ರೌಢಶಿಕ್ಷಣ)

ಸಂಕಲನರಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಮುದ್ರಿಸಲು ಹಾಗೂ ಇದರ 200 ಪ್ರತಿಗಳನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ, 6ನೇ ಮಹಡಿ, ಪ್ರೌಢ-2 ಶಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇಲ್ಲಿಗೆ ಕಳುಹಿಸಲು ಕೋರಿದೆ.

ಪ್ರತಿಗಳು:

1. ಪ್ರಧಾನ ಮಹಾಲೇಖಪಾಲರು(ಎ & ಇ), ಕರ್ನಾಟಕ ರಾಜ್ಯ, ಬೆಂಗಳೂರು.

2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ.
4. ನಿರ್ದೇಶಕರು(ಪರೀಕ್ಷೆಗಳು), ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
5. ನಿರ್ದೇಶಕರು(ಇತರೆ ಪರೀಕ್ಷೆಗಳು), ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
6. ನಿರ್ದೇಶಕರು, ಆರ್.ಎಂ.ಎಸ್.ಎ., ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
8. ಸದಸ್ಯರುಗಳಿಗೆ ನಿರ್ದೇಶಕರು(ಪರೀಕ್ಷೆಗಳು), ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಇವರ ಮುಖಾಂತರ.
9. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಅಪರ ಕಾರ್ಯದರ್ಶಿಗಳು.
10. ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇವರ ಆಪ್ತ ಕಾರ್ಯದರ್ಶಿ/ಸಹಾಯಕರಿಗೆ.
11. ಉಪ ಕಾರ್ಯದರ್ಶಿ(ಸೇವೆಗಳು), ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇವರ ಆಪ್ತ ಸಹಾಯಕರು.
12. ಸರ್ಕಾರದ ಅಧೀನ ಕಾರ್ಯದರ್ಶಿ(ಸಮನ್ವಯ), ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ.
13. ಸಂಯೋಜಕರು, ಮಾಹಿತಿ ಕೇಂದ್ರ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಶಿಕ್ಷಣ ಇಲಾಖೆ.
14. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.